# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಂಗೀತ ಪರಿಷತ್ ಮಂಗಳೂರು (ರಿ). ಇವರಿಗೆ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲು ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಪತ್ರ ಸಂಖ್ಯೆ:ಡಿಕೆಸಿ/33011/217/2019. ದಿನಾಂಕ.12-12-2019.

ಪ್ರಸ್ತಾವನೆ:-

ಸಂಗೀತ ಪರಿಷತ್ ಮಂಗಳೂರು (ರಿ). ಇವರ ವತಿಯಿಂದ ಮಂಗಳೂರು ಸಂಗೀತೋತ್ಸವ ಕಾರ್ಯಕ್ರಮವನ್ನು 2020 ಜನವರಿ ತಿಂಗಳಲ್ಲಿ ಏರ್ಪಡಿಸುತ್ತಿದ್ದು, ಈ ಕಾರ್ಯಕ್ರಮದಲ್ಲಿ ಖ್ಯಾತ ಸಂಗೀತ ಕಲಾವಿದರು ಭಾಗವಹಿಸಲಿದ್ದು, ಈ ಯೋಜನೆಗೆ ಧನಸಹಾಯ ನೀಡುವಂತೆ ಸನ್ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ್ದು, ಸಲ್ಲಿಸಿರುವ ನಡವಳಿ ಪತ್ರದ ಮೇಲೆ ರೂ.10.00ಲಕ್ಷ ಕೂಡಲೇ ಬಿಡುಗಡೆ ಮಾಡುವುದು ಎಂದು ಸೂಚ್ಯಾದೇಶವನ್ನು ನೀಡಿರುವ ಹಿನ್ನೆಲೆಯಲ್ಲಿ ಲೆಕ್ಕಶೀರ್ಷಿಕೆ 2202-00-102-4-31-059ರಡಿ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಿ ಆದೇಶ ಹೊರಡಿಸಲು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ಮೇಲೆ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಮಾನ್ಯ ಇಲಾಖಾ ಸಚಿವರು ಮಂಗಳೂರು ಸಂಗೀತೋತ್ಸವ ಕಾರ್ಯಕ್ರಮಕ್ಕೆ ರೂ.5.00ಲಕ್ಷಗಳ ಅನುದಾನವನ್ನು ಮಂಜೂರು ಮಾಡಲು ಅನುಮೋದನೆ ನೀಡಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 252 ಕಸಧ 2019, ಬೆಂಗಳೂರು, ದಿನಾಂಕ:24-01-2020.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಂಗೀತ ಪರಿಷತ್ ಮಂಗಳೂರು (ರಿ). ಇವರ ವತಿಯಿಂದ ಜನವರಿ 2020ರಲ್ಲಿ ನಡೆಲಿರುವ ಮಂಗಳೂರು ಸಂಗೀತೋತ್ಸವ ಕಾರ್ಯಕ್ರಮಕ್ಕೆ ರೂ.5.00ಲಕ್ಷ (ರೂಪಾಯಿ ಐದು ಲಕ್ಷಗಳು ಮಾತ್ರ)ಗಳನ್ನು ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು, ಇವರ ಮುಖಾಂತರ ಸಂಬಂಧಿಸಿದವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಮಂಜೂರಾತಿ ನೀಡಿದೆ.

1. ಯಾವ ಉದ್ದೇಶಕ್ಕೆ ಅನುದಾನ ಬಿಡುಗಡೆ ಮಾಡಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಹಣ ಬಳಕೆ ಪ್ರಮಾಣಪತ್ರವನ್ನು ಒದಗಿಸುವುದು.

2) ಈ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-102-4-31-059 ರಡಿಯಲ್ಲಿ ಭರಿಸತಕ್ಕದ್ದು.

3) ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2020. ದಿನಾಂಕ:13-01-2020ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

Malati M 24/1/20

(ಪಿ.ಎಸ್.ಮಾಲತಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ.
(ಸಂಸ್ಕೃತಿ)

ಗೆ:

1. ಮಹಾಲೇಖಪಾಲರು (ಎ&ಇ), (ಜಿ&ಎಸ್ ಎಸ್ ಎ), (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು.
3. ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಖಜಾನೆ ಅಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಸಂಬಂಧಪಟ್ಟವರಿಗೆ (ನಿರ್ದೇಶಕರ ಮುಖಾಂತರ)